5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ದ.ಕ., ಮಂಗಳೂರು,
ಕಾರ್ಯನಿರ್ವಹಣೆ, ಪುತ್ತೂರು, ದ.ಕ.

## ಸೆಷನ್ಸ್ ಕೇಸ್ ನಂಬ್ರ **5017/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಸಂತೋಷ್ ಪಿ. | ಪ್ರಾಸಾಃ 5 |
| ತಂದೆಯ ಹೆಸರು | : | ನಾರಾಯಣ ಮೂಲ್ಯ | ಚಾಸಾಃ 7 |
| ಪ್ರಾಯ | : | 40 ವರ್ಷ | ದಿನಾಂಕಃ **22.08.2024** ರಂದು ಸಾಕ್ಷಿದಾರರಿಗೆ ಪ್ರಮಾಣವಚನ ಬೋಧಿಸಲಾಯಿತು. |
| ಉದ್ಯೋಗ | : | ಮೇಸ್ತ್ರಿಕೆಲಸ | |
| ವಾಸಸ್ಥಳ | : | ಕೆಳಂದೂರು ಮನೆ, ಪಡವನ್ನೂರು ಗ್ರಾಮ, ಪುತ್ತೂರು ತಾಲೂಕು. | |

ಮುಖ್ಯ ವಿಚಾರಣೆಃ ಮಾನ್ಯ ಸರಕಾರಿ ಅಭಿಯೋಜಕರಿಂದಃ

ನನಗೆ ಪ್ರಾಸಾ.2 ರವರ ಪರಿಚಯ ಇರುತ್ತದೆ. ನನಗೆ ಪ್ರಾಸಾ.1 ಮತ್ತು ಚಾಸಾ.6 ರವರ ಪರಿಚಯ ಇರುವುದಿಲ್ಲ. ನನಗೆ ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ಇರುತ್ತದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಒಮ್ಮೆ ಪೊಲೀಸರು ನನ್ನನ್ನು ಠಾಣೆಗೆ ಕರೆದು ಸಹಿ ಮಾಡುವಂತೆ ಹೇಳಿದ್ದರಿಂದ ಠಾಣೆಗೆ ಹೋಗಿ ಸಹಿ ಮಾಡಿರುತ್ತೇನೆ. ನಾನು ಪೊಲೀಸರಿಗೆ ಯಾವುದೇ ಮರುಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸರಕಾರಿ ಅಭಿಯೋಜಕರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಕಡತವನ್ನು ಪರಿಶೀಲಿಸಿ, ಸರಕಾರಿ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸರಕಾರಿ ಅಭಿಯೋಜಕರಿಂದಃ

2. ದಿನಾಂಕ 15.11.2015 ರಂದು ನಾನು ನನ್ನ ಮನೆಯಿಂದ ಈಶ್ವರಮಂಗಲಕ್ಕೆ ಹೋಗಿದ್ದು, ಬೆಳಿಗ್ಗೆ ಸುಮಾರು 6.45 ಗಂಟೆಗೆ ನನ್ನ ಪರಿಚಯದ ನ್ಯಾಯಾಲಯದ

ಮುಂದಿರುವ 1ನೇ ಆರೋಪಿಯು ನೋಂದಣಿಯಾಗದ ಜೀಪೊಂದನ್ನು ಚಲಾಯಿಸಿಕೊಂಡು ಕುಕ್ಕಾಜೆ ಕಡೆಗೆ ಹೋಗುವ ರಸ್ತೆಯಲ್ಲಿ ಹೋಗಿರುವುದನ್ನು ನಾನು ನೋಡಿರುತ್ತೇನೆ ಎಂದರೆ ಸರಿಯಲ್ಲ. ಅವರ ಪಕ್ಕದಲ್ಲಿ ನನಗೆ ಪರಿಚಯವಿರುವ ವ್ಯಕ್ತಿಯೊಬ್ಬರು ಇರುವುದನ್ನು ನಾನು ನೋಡಿರುತ್ತೇನೆ ಎಂದರೆ ಸರಿಯಲ್ಲ. ಸುಮಾರು 7.30 ಗಂಟೆಗೆ ನಾನು ಕೆಳಂದೂರು ಚಡಾವು ಎಂಬಲ್ಲಿಗೆ ತಲುಪಿದಾಗ ಪ್ರಾಸಾ.1 ರವರು ಅವರ ಮೋಟಾರುಸೈಕಲನ್ನು ನೋಡುತ್ತಿದ್ದು, ಅಲ್ಲಿ ಚಾಸಾ.6 ಮತ್ತು ಪ್ರಾಸಾ.1 ರವರು ಇರುವುದನ್ನು ನಾನು ನೋಡಿರುತ್ತೇನೆ ಎಂದರೆ ಸರಿಯಲ್ಲ. ನಂತರ ನಾನು ಅವರ ಬಳಿಗೆ ಹೋಗಿ ವಿಚಾರಿಸಿದಾಗ ಪ್ರಾಸಾ.2 ರವರು ಮೋಟಾರುಸೈಕಲಿನಲ್ಲಿ ಹಾಲು ತೆಗೆದುಕೊಂಡು ಹೋಗುವ ಸಮಯದಲ್ಲಿ ಈಶ್ವರಮಂಗಲ ಕಡೆಯಿಂದ ನೋಂದಣಿ ನಂಬ್ರ ಇಲ್ಲದ ಜೀಪೊಂದನ್ನು 1ನೇ ಆರೋಪಿಯು ಚಲಾಯಿಸಿಕೊಂಡು ಬಂದು ರಸ್ತೆಯ ಎಡಬದಿಯಲ್ಲಿ ಹೋಗುತ್ತಿದ್ದ ನನ್ನ ಮೋಟಾರುಸೈಕಲಿಗೆ ಉದ್ದೇಶಪೂರ್ವಕವಾಗಿ ಡಿಕ್ಕಿಯುಂಟು ಮಾಡಿ ಕೊಲೆ ಮಾಡಲು ಯತ್ನಿಸಿದ್ದು, ನಾನು ಮೋಟಾರುಸೈಕಲಿನಿಂದ ಬಿದ್ದು ಓಡಿ ಹೋಗುವಾಗ 2ನೇ ಆರೋಪಿಯು ನನ್ನನ್ನು ಬೆನ್ನಟ್ಟಿ ಬಂದವರು ಮುಖಕ್ಕೆ ಹೊದ್ದಿದ್ದ ಶಾಲು ಅವರ ಕಾಲಿಗೆ ತಾಗಿ ಅವರು ಬಿದ್ದು ನಂತರ ನಾನು ಅಲ್ಲಿಂದ ಓಡಿ ತಪ್ಪಿಸಿಕೊಂಡಿರುವ ವಿಚಾರವನ್ನು ನನಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಘಟನೆಗೆ ಕಾರಣವೇನೆಂದು ನಾನು ಕೇಳಿದಾಗ ಪ್ರಾಸಾ.2 ರವರು ಈ ಹಿಂದೆ 1ನೇ ಆರೋಪಿಯ ಜಮೀನಿನ ಉಸ್ತುವಾರಿ ನೋಡಿಕೊಳ್ಳುತ್ತಿದ್ದು, ಈಗ ಅವರೊಳಗೆ ವೈಮನಸ್ಸು ಇದ್ದುದರಿಂದ ಆರೋಪಿತರು ಸೇರಿ ನನ್ನ ಮೋಟಾರುಸೈಕಲಿಗೆ ಡಿಕ್ಕಿ ಹೊಡೆದು ಕೊಲೆ ಮಾಡುವ ಉದ್ದೇಶದಿಂದ ಪ್ರಯತ್ನಿಸಿದ್ದಾರೆ ಎಂಬ ವಿಚಾರವನ್ನು ನನಗೆ ಪ್ರಾಸಾ.2ರವರು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಘಟನೆ ನಡೆದ ಬಗ್ಗೆ ಪ್ರಾಸಾ.1 ರವರು ದೂರು ನೀಡಿದ್ದು, ತನಿಖೆಯ ಕಾಲಕ್ಕೆ ಪೊಲೀಸರಿಗೆ ನಾನು ದಿನಾಂಕ 16.11.2015 ರಂದು ಈಗ ನನಗೆ ಓದಿ ಹೇಳಿದಂತೆ "ದಿನಾಂಕ 15.11.2015 ರಂದು………………… ಕೊಲೆ ಮಾಡಲು ಪ್ರಯತ್ನಿಸಿರುವುದಾಗಿದೆ"

ಎಂಬುದಾಗಿ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಶಾನೆ ಪಿ-18 ಎಂದು ಗುರುತಿಸಲಾಯಿತು.

3. ದಿನಾಂಕ 08.11.2016 ರಂದು ತನಿಖೆಯ ಸಲುವಾಗಿ ಪೊಲೀಸ್ ಠಾಣೆಗೆ ನನ್ನನ್ನು ಹಾಜರಾಗುವಂತೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಠಾಣೆಗೆ ಬಂದಂತಹ ಸಂದರ್ಭದಲ್ಲಿ ಈ ದಿನ ನ್ಯಾಯಾಲಯದ ಮುಂದಿರುವ 2ನೇ ಆರೋಪಿಯನ್ನು ನೋಡಿದ್ದು, ಅವರೇ ದಿನಾಂಕ 15.11.2015 ರಂದು 1ನೇ ಆರೋಪಿಯ ನೋಂದಣಿಯಾಗದ ಜೀಪಿನ ಎಡಬದಿಯಲ್ಲಿ ಕುಳಿತಿದ್ದ ವ್ಯಕ್ತಿ ಆಗಿರುತ್ತಾನೆ ಎಂದು ನಾನು ಗುರುತಿಸಿ ಅದೇ ದಿನ ಈಗ ನನಗೆ ಓದಿ ಹೇಳಿದಂತೆ "ಈ ದಿನ ತನಿಖೆಯ ಬಗ್ಗೆ.................... ನ್ಯಾಯಾಲಯದಲ್ಲಿ ಗುರುತಿಸುತ್ತೇನೆ " ಎಂಬುದಾಗಿ ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಮರುಹೇಳಿಕೆಯನ್ನು ನಿಶಾನೆ ಪಿ-19 ಎಂದು ಗುರುತಿಸಲಾಯಿತು.

4. ಪ್ರಸ್ತುತ ಪ್ರಾಸಾ.2 ರವರು ಮೃತಪಟ್ಟಿದ್ದಾರೆ. ಪ್ರಾಸಾ.2 ರವರು ಮೃತಪಟ್ಟಿದ್ದರಿಂದ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ **1** ಮತ್ತು **2**ನೇ ಆರೋಪಿತರ ಪರ ಶ್ರೀ ಎಂ.ವಿ.ಜಿ. ವಕೀಲರಿಂದಃ</u>

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.)

(ಸಾಕ್ಷಿದಾರರ ಹೇಳಿಕೆಯಂತೆ ನನ್ನ ಉಕ್ತಲೇಖನ ರೀತ್ಯಾ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದ.ಕ., ಮಂಗಳೂರು, ಕಾರ್ಯನಿರ್ವಹಣೆಃ ಪುತ್ತೂರು.